# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 55 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 15.07.2024 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಹೊಸ ಬಿಪಿಎಲ್ ಕಾರ್ಡ್‌ಗಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) | ರಾಜ್ಯದಲ್ಲಿ ದಿನಾಂಕ: 03.07.2024 ರವರೆಗೆ ಹೊಸ ಆದ್ಯತಾ ಪಡಿತರ ಚೀಟಿ ಕೋರಿ ಒಟ್ಟು 3,22,483 ಅರ್ಜಿಗಳು ಸ್ವೀಕೃತವಾಗಿರುತ್ತದೆ.<br>ಜಿಲ್ಲಾವಾರು ಮಾಹಿತಿಯನ್ನು ಅನುಬಂಧ -01 ರಲ್ಲಿ ಒದಗಿಸಲಾಗಿದೆ. |
| ಆ | ಹೊಸ ಬಿಪಿಎಲ್ ಕಾರ್ಡ್‌ದಾರರಿಗೆ ಕಾರ್ಡ್‌ಗಳನ್ನು ನೀಡುವ ಪ್ರಕ್ರಿಯೆ ಪ್ರಾರಂಭಿಸಲಾಗಿದೆಯೇ; (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021, ದಿನಾಂಕ: 29.09.2023 ರಲ್ಲಿ 2,95,986 ಅರ್ಜಿಗಳ ವಿಲೇವಾರಿ ಬಗ್ಗೆ ಆದೇಶಿಸಿಲಾಗಿರುತ್ತದೆ. ಇದರಲ್ಲಿ ಸುಮಾರು 62,595 ಅರ್ಜಿಗಳನ್ನು ಅನುಮೋದಿಸಿದ್ದು, ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಸಿರುವ ಬಾಕಿ ಅರ್ಜಿಗಳ ಪರಿಶೀಲನೆ ಮಾಡಲು ರಾಜ್ಯದ ಎಲ್ಲಾ ಜಂಟಿ/ ಉಪ ನಿರ್ದೇಶಕರಿಗೆ ನಿರ್ದೇಶನ ನೀಡಲಾಗಿರುತ್ತದೆ. |
| ಇ | ರಾಜ್ಯದಲ್ಲಿ ಅನರ್ಹ ಕಾರ್ಡ್‌ಗಳನ್ನು ಗುರುತಿಸಲಾಗಿದೆಯೇ; ಗುರುತಿಸಿದ್ದಲ್ಲಿ ಅವುಗಳನ್ನು ರದ್ದುಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಈ ಕೆಳಕಂಡ (ಅನರ್ಹತೆಯನ್ನಾಧರಿಸಿ ಹೊರಗಿಡುವ) ಮಾನದಂಡಗಳನ್ನು ಜಾರಿಯಲ್ಲಿರುತ್ತವೆ.<br>1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ವ್ಯಾಟ್/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು. |

| | | |
|---|---|---|
| | | 2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ.1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br>ಮೇಲಿನ ಮಾನದಂಡಗಳನ್ವಯ ರಾಜ್ಯದ ಎಲ್ಲಾ ಅರ್ಹ ಫಲಾನುಭವಿಗಳಿಗೆ ಆದ್ಯತಾ ಪಡಿತರ (BPL) ಚೀಟಿಗಳನ್ನು ಕೋರಿ ಸಲ್ಲಿಸಿರುವ ಅರ್ಜಿಗಳ ವಿಲೇವಾರಿಗೆ ಕ್ರಮ ವಹಿಸಲಾಗಿರುತ್ತದೆ.<br>ಮೇಲ್ಕಂಡ ಮಾನದಂಡಗಳ ವಿರುದ್ಧವಾಗಿ ಪಡಿತರ ಚೀಟಿ ಪಡೆದವರ ಮಾಹಿತಿಯನ್ನು ಪಡೆದು ಅನರ್ಹರು ಹೊಂದಿರುವಂತಹ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳಾಗಿ ಪರಿವರ್ತಿಸಿ ಹಾಗೂ ಅನರ್ಹರಿಂದ 2020-21ನೇ ಸಾಲಿನಿಂದ ಇಲ್ಲಿಯವರೆವಿಗೂ ಒಟ್ಟು 3,41,632 ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಲಾಗಿದ್ದು ಇವರಿಂದ ಒಟ್ಟು ರೂ. 13,75,20,710 ದಂಡ ವಸೂಲಿ ಮಾಡಲಾಗಿರುತ್ತದೆ. |
| ಈ | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬಿಪಿಎಲ್ ಕಾರ್ಡ್‌ಗಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಈ ಅರ್ಜಿಗಳ ವಿಲೇವಾರಿ ಮಾಡಲು ಇಲಾಖೆ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೊಸ ಆದ್ಯತಾ ಪಡಿತರ ಚೀಟಿ ಕೋರಿ 5,526 ಸ್ವೀಕೃತವಾಗಿರುತ್ತವೆ. ಈ ಪೈಕಿ 926 ಅರ್ಜಿಗಳು ವಿಲೇಯಾಗಿದ್ದು, 04 ಅರ್ಜಿಗಳು ತಿರಸ್ಕೃತವಾಗಿರುತ್ತದೆ. ಉಳಿದ 4,596 ಅರ್ಜಿಗಳನ್ನು ತ್ವರಿತವಾಗಿ ಪರಿಶೀಲನೆ ಮಾಡಿ ವಿಲೇವಾರಿ ಮಾಡಲು |

| | | |
|---|---|---|
| | | ಜಿಲ್ಲೆಯ ಉಪ ನಿರ್ದೇಶಕರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರಿಗೆ ನಿರ್ದೇಶನ ನೀಡಲಾಗಿರುತ್ತದೆ. |
| ಉ | ಅನಾರೋಗ್ಯ ಪೀಡಿತರಿಗೆ ಬಿಪಿಎಲ್ ಕಾರ್ಡ್ ನೀಡದೇ ಚಿಕಿತ್ಸೆ ಪಡೆಯಲು ಉಂಟಾಗಿರುವ ತೊಂದರೆಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು? | ತುರ್ತು ವೈದ್ಯಕೀಯ ಪರಿಸ್ಥಿತಿಗಳ ಹಿನ್ನೆಲೆಯಲ್ಲಿ ಅರ್ಹ ಆದ್ಯತಾ ಪಡಿತರ ಚೀಟಿದಾರರಿಗೆ ನಿರಂತರವಾಗಿ ಪಡಿತರ ಚೀಟಿ ನೀಡುವ ಕಾರ್ಯ/ಪಡಿತರ ಚೀಟಿ ತಿದ್ದುಪಡಿ ಕಾರ್ಯ ಪ್ರಗತಿಯಲ್ಲಿರುತ್ತದೆ. |

ಆನಾಸ 195 ಡಿಆರ್ಎ 2024 (ಇ-ಆಫೀಸ್)

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ

ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ

ಇಲಾಖಾ ಸಚಿವರು

LCQ-55

# ಅನುಬಂಧ-01

## ಶ್ರೀ. ಐವನ್ ಡಿ' ಸೋಜಾ ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 55

| ಕ್ರ. ಸಂ. | ಜಿಲ್ಲೆ | ದಿನಾಂಕ: 03.07.2024 ರನ್ವಯ ಆದ್ಯತಾ ಪ. ಚೀ ಕೋರಿ ಬಾಕಿ ಇರುವ ಅರ್ಜಿಗಳ ವಿವರ |
|---|---|---|
| 1 | BAGALKOTE | 13,335 |
| 2 | BALLARI | 10,501 |
| 3 | BANGALORE EAST | 6,082 |
| 4 | BANGALORE NORTH | 4,747 |
| 5 | BANGALORE SOUTH | 4,794 |
| 6 | BANGALORE WEST | 11,010 |
| 7 | BELAGAVI | 32,880 |
| 8 | BENGALURU | 16,438 |
| 9 | BENGALURU RURAL | 7,041 |
| 10 | BIDAR | 18,262 |
| 11 | CHAMARAJANAGARA | 3,639 |
| 12 | CHIKKABALLAPURA | 5,356 |
| 13 | CHIKKAMAGALURU | 3,628 |
| 14 | CHITRADURGA | 6,432 |
| 15 | DAKSHINA KANNADA | 4,879 |
| 16 | DAVANAGERE | 4,089 |
| 17 | DHARWAR | 11,575 |
| 18 | GADAG | 9,881 |
| 19 | HASSAN | 5,452 |
| 20 | HAVERI | 11,094 |
| 21 | KALABURAGI | 26,898 |
| 22 | KODAGU | 1,583 |
| 23 | KOLAR | 5,006 |
| 24 | KOPPAL | 8,560 |
| 25 | MANDYA | 4,756 |
| 26 | MYSURU | 6,796 |
| 27 | RAICHUR | 15,608 |
| 28 | RAMANAGARA | 3,859 |
| 29 | SHIVAMOGGA | 6,583 |
| 30 | TUMAKURU | 8,379 |
| 31 | UDUPI | 2,381 |
| 32 | UTTARA KANNADA | 4,055 |
| 33 | VIJAYANAGARA | 5,364 |
| 34 | VIJAYAPURA | 24,089 |
| 35 | YADGIR | 7,451 |
| | | |
| **TOTAL** | | **3,22,483** |

f Mhapdathu

ಅಪರ ನಿರ್ದೇಶಕರು (ಐಟಿ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಇಲಾಖೆ